# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ : **387 (536)**
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 19.02.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ/ಅನುದಾನಿತ ಪ್ರೌಢಶಾಲೆಗಳಲ್ಲಿನ ಮುಖ್ಯ ಶಿಕ್ಷಕರಿಗೆ ಕುಮಾರನಾಯ್ಕ್ ವರದಿ ಪ್ರಕಾರ ಒಂದು ವಿಶೇಷ ಭತ್ಯೆ ನೀಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಇಡಿ 78 ಎಸ್ ಎಲ್‌ಬಿ 2016, ದಿನಾಂಕ:15/04/2016ರಲ್ಲಿ ಜೂನ್ 2016ರಂದು ಕಾರ್ಯ ನಿರ್ವಹಿಸುತ್ತಿರುವ ಸರ್ಕಾರಿ ಅನುದಾನಿತ ಪ್ರೌಢಶಾಲಾ ಮುಖ್ಯ ಶಿಕ್ಷಕರುಗಳಿಗೆ ದಿನಾಂಕ:01/06/2016 ರಿಂದ ಜಾರಿಗೆ ಬರುವಂತೆ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಮಂಜೂರು ಮಾಡಲಾಗಿದೆ.<br><br>ಮೇಲ್ಕಂಡ ಆದೇಶದಲ್ಲಿ ಮಂಜೂರು ಮಾಡಿರುವ ಒಂದು ಹೆಚ್ಚುವರಿ ವೇತನ ಬಡ್ತಿಯನ್ನು ಸರ್ಕಾರದ ಆದೇಶ ಸಂಖ್ಯೆ: ಆಇ 28 ಎಸ್‌ಆರ್‌ಪಿ 2018, ದಿನಾಂಕ:20/10/2018ರ ಆದೇಶದಲ್ಲಿ 2018ರ ಪರಿಷ್ಕೃತ ವೇತನ ಶ್ರೇಣಿಯಲ್ಲಿ ಪಡೆಯುತ್ತಿರುವ ಮೂಲ ವೇತನದೊಂದಿಗೆ ದಿನಾಂಕ:01/11/2018 ರಿಂದ ಜಾರಿಗೆ ಬರುವಂತೆ ವಿಲೀನಗೊಳಿಸಿ ಆದೇಶಿಸಿದೆ. |
| ಆ) | ಈ ಸಂಬಂಧ ಎಲ್ಲಾ ವೃಂದದ ಶಿಕ್ಷಕರಿಗೂ ವಿಶೇಷ ಭತ್ಯೆ ನೀಡಿ, ಮುಖ್ಯ ಶಿಕ್ಷಕರಿಗೆ ನೀಡದೆ ಇರಲು ಕಾರಣಗಳೇನು; (ವಿವರ ನೀಡುವುದು) | ಕಂಡಿಕೆ 'ಅ' ಉತ್ತರದ ಹಿನ್ನಲೆಯಲ್ಲಿ ಪ್ರಶ್ನೆ ಉದ್ಭವಿಸುವುದಿಲ್ಲ |
| ಇ) | ಇದರಿಂದಾಗಿ ವೇತನದಲ್ಲಿ ವ್ಯತ್ಯಾಸವಾಗಿ, ಆರ್ಥಿಕ ಸವಲತ್ತಿನಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | |
| ಈ) | ಯಾವ ಕಾಲಮಿತಿಯಲ್ಲಿ ಸದರಿ ಸವಲತ್ತನ್ನು ನೀಡಲಾಗುವುದು? | |

ಸಂಖ್ಯೆ:ಇಪಿ 35 ಎಸ್‌ಎಲ್‌ಬಿ 2024

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು